# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಜವರಯ್ಯ, ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಎನ್.ಬೇಗೂರು ಗ್ರಾಮ ಪಂಚಾಯಿತಿ, ಹೆಚ್.ಡಿ.ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14ಎ ಅಡಿಯಲ್ಲಿ ಮಾನ್ಯ ಉಪಲೋಕಯುಕ್ತರಿಗೆ ವಹಿಸುವ ಬಗ್ಗೆ – ಆದೇಶ.

**ಓದಲಾಗಿದೆ:**

ಸ್ವೀಕೃತಿಸಂಖ್ಯೆ:ಅ.ಸ.ಪ.ಸಂ/ಕಂಪ್ಲೇಂಟ್/ಉಪಲೋಕ್/ಎಮ್‌ವೈಎಸ್–9186/2017/ಡಿಆರ್‌ಇ–4, ದಿನಾಂಕ:14.09.2018.

**ಪ್ರಸ್ತಾವನೆ:**

ಮೇಲೆ ಓದಲಾದ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ನಿಬಂಧಕರು ಕರ್ನಾಟಕ ಲೋಕಾಯುಕ್ತ ಇವರ ಪತ್ರದ ಸಂಗಡ ಲಗತ್ತಿಸಿರುವ ಮಾನ್ಯ ಉಪಲೋಕಾಯುಕ್ತರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಸೆಕ್ಷನ್ 12(3) ರ ಅಡಿಯಲ್ಲಿ ಸಲ್ಲಿಸಿರುವ ದಿನಾಂಕ: 18.08.2018 ರ ವರದಿಯಲ್ಲಿ ಈ ಕೆಳಗಿನಂತೆ ತಿಳಿಸಿರುತ್ತಾರೆ.

ಶ್ರೀ ಚಂದ್ರೇಗೌಡ ಬಿನ್ ಲೇಟ್.ಚಿನ್ನಪ್ಪ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪುತ್ತಾರೆ) ತಮ್ಮ ದೂರಿನಲ್ಲಿ ಶ್ರೀ ಜವರಯ್ಯ ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಎನ್.ಬೇಗೂರು ಗ್ರಾಮ ಪಂಚಾಯಿತಿ, ಹೆಚ್.ಡಿ.ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿರುತ್ತಾರೆ.

ದೂರಿನ ಸಂಕ್ಷಿಪ್ತ ವಿವರಣೆ:– ಮೈಸೂರು ಜಿಲ್ಲೆ ಹೆಚ್.ಡಿ.ಕೋಟೆ ತಾಲ್ಲೂಕಿನ ಎನ್.ಬೇಗೂರು ಗ್ರಾಮ ಪಂಚಾಯತ್‌ನಲ್ಲಿ ದಿನಾಂಕ:28/06/2016 ರಿಂದ 16/06/2017ರವರೆಗಿನ ಅವಧಿಯಲ್ಲಿ ಎದುರುದಾರರು ಗ್ರಾಮ ಪಂಚಾಯತ್ ವಿವಿಧ ಖಾತೆಗಳಿಂದ ಸುಮಾರು ರೂ.40 ಲಕ್ಷಗಳಷ್ಟು ಅವ್ಯವಹಾರ ನಡೆಸಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆಯೆಂದು ಆಪಾದಿಸಿದ್ದಾರೆ.

ದೂರಿನ ಬಗ್ಗೆ ವರದಿ ಸಲ್ಲಿಸುವಂತೆ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್, ಹೆಚ್.ಡಿ.ಕೋಟೆ (ಇನ್ನು ಮುಂದೆ 'ತನಿಖಾಧಿಕಾರಿಗಳು' ಎಂದು ಕರೆಯಲ್ಪಡುತ್ತಾರೆ) ರವರನ್ನು ಕೇಳಲಾಗಿ ಸದರಿಯವರು ತಮ್ಮ ವರದಿಯಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ನಿಂದ ತನಿಖಾ ತಂಡವನ್ನು ರಚಿಸಿ, ಎನ್.ಬೇಗೂರು ಗ್ರಾಮ ಪಂಚಾಯತ್‌ನಲ್ಲಿ ಪೂರ್ಣವಾಗಿ ತಪಾಸಣೆ ಮಾಡಿ, ತಪಾಸಣಾ ವರದಿಯಲ್ಲಿ ರೂ.14,58,408/– ಆಕ್ಷೇಪಣಾ ಮೊತ್ತವನ್ನಾಗಿಯೂ ಹಾಗೂ ರೂ.19,94,472/–ಗಳನ್ನು ವಸೂಲಾತಿಗಾಗಿ ಸೂಚಿಸಿದ್ದು, ತಮ್ಮ ಪತ್ರ ಸಂ:ಸಿಇಒ/12/17–18/17861 ದಿನಾಂಕ:26.10.2017ರ ಆದೇಶದಲ್ಲಿ 1ನೇ ಎದುರುದಾರರ ವಿರುದ್ಧ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ, ಅಮಾನತ್ತು ಆದೇಶವನ್ನು ಹೊರಡಿಸಿದ್ದಾರೆಂದು ಹೇಳಿದ್ದಾರೆ.

ವರದಿಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, ಎದುರುದಾರರು ತಮ್ಮ ಆಕ್ಷೇಪಣೆಗಳಲ್ಲಿ ದೂರುದಾರರು ಕಾನೂನನ್ನು ಸರಿಯಾಗಿ ಮನವರಿಕೆ ಮಾಡಿಕೊಳ್ಳದೆ ತಪ್ಪಾಗಿ ಅರ್ಥೈಸಿಕೊಂಡು ಪಂಚಾಯತ್‌ನ ಎಲ್ಲಾ ವ್ಯವಹಾರವನ್ನು ಅವ್ಯವಹಾರವೆಂದು ಸತ್ಯಾಂಶವಿಲ್ಲದ ದೂರನ್ನು ದಾಖಲಿಸಿದ್ದಾರೆಂದು ತಿಳಿಸಿರುತ್ತಾರೆ.

ಹೆಚ್.ಡಿ.ಕೋಟೆ ತಾಲ್ಲೂಕಿನ ಎನ್.ಬೇಗೂರು ಗ್ರಾಮ ಪಂಚಾಯತ್‌ನಲ್ಲಿ ಎದುರುದಾರರುಗಳು ಹಣದ ಅವ್ಯವಹಾರ ಎಸಗಿದ್ದಾರೆಂಬ ದೂರಿನ ಹಿನ್ನೆಲೆಯಲ್ಲಿ ಸದರಿ ಪಂಚಾಯತ್ ಕಛೇರಿಯ 2016–17 ಮತ್ತು 2017–18ನೇ ಸಾಲಿನ, ಜೂನ್, 2017ರವರೆಗಿನ ಅವಧಿಯ ವಿಶೇಷ ಲೆಕ್ಕ ತಪಾಸಣೆಯನ್ನು ಮೈಸೂರು ಜಿಲ್ಲಾ ಪಂಚಾಯತ್‌ನ ಲೆಕ್ಕಾಧೀಕ್ಷಕರುಗಳು ದಿನಾಂಕ:25.07.2017 ರಿಂದ 28.07.2017ರವರೆಗೆ ನಡೆಸಿದ್ದು, ವಿವಿಧ

ಕಾಮಗಾರಿಗಳಲ್ಲಿ ಹಣ ದುರುಪಯೋಗವಾಗಿರುವುದಾಗಿ ತಿಳಿಸಿದ್ದು, ಆಕ್ಷೇಪಣೆಗಳು ಮತ್ತು ವಸೂಲು ಮಾಡಲು ಸೂಚಿಸಿದ ಮೊತ್ತ ಲೆಕ್ಕಪರಿಶೋಧನೆಯಲ್ಲಿ ಕಂಡು ಬಂದಿದೆ. ಲೆಕ್ಕ ಪರಿಶೋಧನೆ ವರದಿಯಲ್ಲಿ ರೂ.14,58,408/-ನ್ನು ಆಕ್ಷೇಪಣಾ ಮೊತ್ತವಾಗಿಯೂ ಮತ್ತು ರೂ.19,94,472/-ಗಳನ್ನು ವಸೂಲಾತಿ ಮೊತ್ತವನ್ನಾಗಿ ಸೂಚಿಸಲಾಗಿದೆ. ಎದುರುದಾರರು ತಮ್ಮ ಅಧಿಕಾರವನ್ನು ದುರುಪಯೋಗಪಡಿಸಿಕೊಂಡು ಗ್ರಾಮ ಪಂಚಾಯಿತಿ ಹಣವನ್ನು ದುರುಪಯೋಗಪಡಿಸಿಕೊಂಡು, ಪಂಚಾಯತ್ ರಾಜ್ ಅಧಿನಿಯಮವನ್ನು ಉಲ್ಲಂಘಿಸಿ, ಕರ್ತವ್ಯ ಲೋಪ ಎಸಗಿರುವುದು ಸಾಬೀತಾಗುತ್ತದೆ.

ಮೇಲ್ಕಂಡ ಅಂಶಗಳು, ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರ ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ಸಮಂಜಸ/ಸಮಾಧಾನಕರ ಕಾರಣವಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿ, ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3) ರ ಅಡಿ ಕ್ರಮ ಕೈಗೊಳ್ಳಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಾಮಗಳು 1966ರ ನಿಯಮ 3(1)ರ ದುರ್ನಡತೆ/ ದುರ್ನಡತೆಯೆಸಗಿದ್ದು, ಶಿಸ್ತು ಕ್ರಮಕ್ಕೆ ಭಾದ್ಯರಾಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(3) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ಎದುರುದಾರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲು ಹಾಗೂ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ನೌಕರನ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957 ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/470/ಗ್ರಾಪಂಕಾ/2018**

**ಬೆಂಗಳೂರು, ದಿನಾಂಕ:30-10-2018.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಜವರಯ್ಯ ಪ್ರಭಾರ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಎನ್.ಬೇಗೂರು ಗ್ರಾಮ ಪಂಚಾಯಿತಿ, ಹೆಚ್.ಡಿ.ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 11ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

30/10/18

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು. (ಮೂಲ ದಾಖಲೆಗಳನ್ನು ಇದರೊಂದಿಗೆ ಹಿಂದಿರುಗಿಸಿದೆ. ಪುಟ ಸಂಖ್ಯೆ: 1 ರಿಂದ 255).
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಹೆಚ್.ಡಿ.ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ.
6. ಶ್ರೀ ಜವರಯ್ಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಎನ್.ಬೇಗೂರು ಗ್ರಾಮ ಪಂಚಾಯಿತಿ, ಹೆಚ್.ಡಿ.ಕೋಟೆ ತಾಲ್ಲೂಕು, ಮೈಸೂರು ಜಿಲ್ಲೆ
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
8. ಗಣಕ ಕೋಶ.